# ಸಿಕಲ್ ಸೆಲ್ ಅನೀಮಿಯಾ ಮುಕ್ತ ಕರ್ನಾಟಕದ ಗುರಿ

## ರಾಜ್ಯಮಟ್ಟದ ವಿಶ್ವ ಸಿಕಲ್‌ಸೆಲ್ ಅನೀಮಿಯಾ ನಿರ್ಮೂಲನಾ ಕಾರ್ಯಕ್ರಮಕ್ಕೆ ಚಾಲನೆ

### ದಿನೇಶ್ ಗುಂಡೂರಾವ್

ಮೈಸೂರು, ಜೂ.19: ಆರೋಗ್ಯ ಸೇವೆಗಳನ್ನು ಅಭಿವೃದ್ಧಿಪಡಿಸಿ ಉತ್ತಮ ಆರೋಗ್ಯ ಸೇವೆಗಳನ್ನು ನೀಡುವುದು ಹಾಗೂ ಕರ್ನಾಟಕವನ್ನು ಅನೀಮಿಯಾ ಮುಕ್ತ ರಾಜ್ಯವನ್ನಾಗಿ ಮಾಡುವುದು ನಮ್ಮ ಗುರಿ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ವಿಶ್ವ ಸಿಕಲ್ ಸೆಲ್ ಅನೀಮಿಯಾ ನಿರ್ಮೂಲನಾ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತೀಯ ವಿಜ್ಞಾನ ಸಂಸ್ಥೆ ಹಾಗೂ ಇಂಡಿಯನ್ ಆಯಿಲ್ ಕಾರ್ಪೋರೇಷನ್ ಸಹಯೋಗದಲ್ಲಿ ರೂಪಿಸಿರುವ ಪ್ರಾಜೆಕ್ಟ್ ಚಂದನ ಯೋಜನೆಯನ್ನು ರಾಜ್ಯ ಸರಕಾರದ ಸಹಭಾಗಿತ್ವದಲ್ಲಿ 2 ವರ್ಷದ ಅವಧಿಗೆ ಜಾರಿಗೊಳಿಸಲಾಗುತ್ತಿದೆ. ಸಿಕಲ್ ಸೆಲ್ ಅನೀಮಿಯಾ ರೋಗದ ಪತ್ತೆ, ಜಾಗೃತಿ ಹಾಗೂ ಚಿಕಿತ್ಸೆ ನೀಡುವುದು ಇದರ ಗುರಿಯಾಗಿದೆ. ಸರಳವಾಗಿ ಸಿಕಲ್ ಸೆಲ್ ಅನೀಮಿಯಾ ಕಂಡು ಹಿಡಿಯುವ ಸಾಧನವನ್ನು ಭಾರತೀಯ ವಿಜ್ಞಾನ ಸಂಸ್ಥೆಯ ಯುವ ವಿಜ್ಞಾನಿಗಳು ಅಭಿವೃದ್ಧಿಪಡಿಸಿದ್ದು, ಇಂಡಿಯನ್ ಆಯಿಲ್ ಕಾರ್ಪೋರೇಷನ್ ಕಂಪೆನಿ ಈ ಸಾಧನಗಳನ್ನು ಕೊಡುಗೆಯಾಗಿ ನೀಡುತ್ತಿದೆ ಎಂದರು.

ಪ್ರಾಜೆಕ್ಟ್ ಚಂದನ ಯೋಜನೆಯಡಿ ಮುಂದಿನ 2 ವರ್ಷಗಳಲ್ಲಿ 2.56 ಲಕ್ಷ ಜನರನ್ನು ಪರೀಕ್ಷೆಗೆ ಒಳಪಡಿಸಿ ಸಿಕಲ್ ಸೆಲ್ ಅನೀಮಿಯಾ ಇರುವವರನ್ನು ಗುರುತಿಸಿ ಚಿಕಿತ್ಸೆ ನೀಡುವ ಗುರಿ ಹೊಂದಲಾಗಿದೆ ಎಂದು ಸಚಿವರು ಹೇಳಿದರು.

ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಕೆ. ಹರೀಶ್ ಗೌಡ, ಆರೋಗ್ಯ ಮತ್ತು ಕುಂಟುಂಬ ಕಲ್ಯಾಣ ಸೇವೆಗಳ ಅಭಿಯಾನದ ನಿರ್ದೇಶಕ ಡಾ. ನವೀನ್ ಭಟ್ ಮಾತನಾಡಿದರು.



> ಬುಡಕಟ್ಟು ಜನಾಂಗದಲ್ಲಿ ಹೆಚ್ಚಾಗಿ ಸಿಕಲ್ ಸೆಲ್ ಅನೀಮಿಯಾ ಕಂಡುಬರುತ್ತಿದೆ. ಬುಡಕಟ್ಟು ಜನರು ಮದುವೆ ಆಗುವಾಗ ಜೆನೆಟಿಕ್ಸ್ ಟೆಸ್ಟ್ ಮಾಡಿಸಿ ಮದುವೆ ಆಗುವುದು ಉತ್ತಮ. ಸಿಕಲ್ ಸೆಲ್ ಅನೀಮಿಯಾ ಇರುವವರು ಪೌಷ್ಟಿಕ ಆಹಾರವನ್ನು ಸೇವನೆ ಮಾಡಬೇಕು.
>
> – ಡಾ. ಕೆ.ವಿ.ರಾಜೇಂದ್ರ,
> ಜಿಲ್ಲಾಧಿಕಾರಿ- ಮೈಸೂರು

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯತ್ರಿ, ಯುವ ವಿಜ್ಞಾನಿ ಸಾಯಿ ಶಿವ ಮತ್ತಿತರರು ಉಪಸ್ಥಿತರಿದ್ದರು.